# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1109** |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರೀನ್ ಹೈಡ್ರೋಜನ್ ಭವಿಷ್ಯದ ಇಂಧನ, ಖಾಸಗಿ ಬಂಡವಾಳವನ್ನು ಈ ವಲಯಕ್ಕೆ ಆಕರ್ಷಿಸಲು 300 ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಪ್ರಾಯೋಗಿಕವಾಗಿ ಅಂದಾಜು 10 ಕೋಟಿ ರೂ.ವೆಚ್ಚದಲ್ಲಿ MNRE ನಿಧಿಯಿಂದ ಸ್ವಯಂ-ಸುಸ್ಥಿರ ಘಟಕದ ಆಧಾರದ ಮೇಲೆ KREDL ವತಿಯಿಂದ ಅನುಷ್ಠಾನಗೊಳಿಸಲಾಗುವುದೆಂದು ಮತ್ತು ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ರಾಜ್ಯದಲ್ಲಿ ಯಾವ ಜಿಲ್ಲೆಯಲ್ಲಿ ಈ ಸ್ಥಾವರವನ್ನು ಸ್ಥಾಪಿಸಲು ಯೋಜಿಸಲಾಗಿದೆ: | ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವತಿಯಿಂದ ಪ್ರಾಯೋಗಿಕ ಮಾದರಿಯಲ್ಲಿ ಬಳ್ಳಾರಿ ಜಿಲ್ಲೆಯ, ಕೆ.ಪಿ.ಸಿ.ಎಲ್ ನ ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರ(BTPS) ದ ಆವರಣದಲ್ಲಿ 1.2ಮೆ.ವ್ಯಾ ಸಾಮರ್ಥ್ಯದ ಸೋಲಾರ್ ಘಟಕದ ಜೊತೆಗೆ 300 ಕಿ.ವ್ಯಾ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | 300 ಕಿಲೋ ವ್ಯಾಟ್ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರವನ್ನು ಸ್ಥಾಪಿಸುವ ಕಾಮಗಾರಿಯ ಪ್ರಸ್ತುತ ಹಂತವೇನು: ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ: (ಇದ್ದಲ್ಲಿ, ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು) | ಕೆ.ಪಿ.ಸಿ.ಎಲ್ ನ ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರ(BTPS) ದ ಆವರಣದಲ್ಲಿ 1.2ಮೆ.ವ್ಯಾ ಸಾಮರ್ಥ್ಯದ ಸೋಲಾರ್ ಘಟಕದ ಜೊತೆಗೆ 300 ಕಿ.ವ್ಯಾ ಸಾಮರ್ಥ್ಯದ ಗ್ರೀನ್ ಹೈಡ್ರೋಜನ್ ಸ್ಥಾವರ ಸ್ಥಾಪನೆಗೆ ಟೆಂಡರ್ ಆಹ್ವಾನಿಸಲಾಗಿದ್ದು, ತಾಂತ್ರಿಕ ಬಿಡ್ಡುಗಳ ಮೌಲ್ಯಮಾಪನ ಮಾಡಲಾಗುತ್ತಿದೆ. |
| ಇ) | ಆಯವ್ಯಯದಲ್ಲಿ ಘೋಷಿಸಿರುವಂತೆ ಗ್ರೀನ್ ಹೈಡ್ರೋಜನ್ ನೀತಿಯನ್ನು ರೂಪಿಸಲಾಗಿದೆಯೇ? (ಇದ್ದಲ್ಲಿ, ನೀತಿಯ ಪ್ರತಿಯನ್ನು ನೀಡುವುದು) | ರಾಜ್ಯದಲ್ಲಿ ಗ್ರೀನ್ ಹೈಡ್ರೋಜನ್ ಯೋಜನೆಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಗ್ರೀನ್ ಹೈಡ್ರೋಜನ್ ಕರಡು ನೀತಿಯನ್ನು ಸಿದ್ಧಪಡಿಸಲಾಗಿದ್ದು, ಇದು ಪರಿಶೀಲನಾ ಹಂತದಲ್ಲಿದೆ. |

ಸಂಖ್ಯೆ: ಎನರ್ಜಿ 62 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು